**ಸಾಕ್ಷಿಗೆ ದಿನಾಂಕ:28-01-2026 ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**:: ಪಾಟೀ ಸವಾಲು :: ಪ್ರತಿವಾದಿ ಪರ ಶ್ರೀ. BPR ವಕೀಲರಿಂದ ::**

ನಾನು 4 ನೇ ತರಗತಿಯವರೆಗೂ ಕೂಡ್ಲೂರಿನ ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿರುತ್ತೇನೆ. ನಾನು ಪ್ರಸ್ತುತದಲ್ಲಿ ಯಾವುದೇ ಕೆಲಸ ಮಾಡುತ್ತಿಲ್ಲ, ಆದರೆ ನನ್ನ ಹೆಂಡತಿ ಬೆಂಗಳೂರಿನಲ್ಲಿ ಕೆಲಸ ಮಾಡುತ್ತಿರುತ್ತಾರೆ.

ವಾದಿ ಹಾಗೂ ಪ್ರತಿವಾದಿಗಳು ಒಂದೇ ಕುಟುಂಬದವರಾಗಿರುತ್ತಾರೆ ಎಂದರೆ ಸರಿ. ದಾವೆಯ ಪಕ್ಷಗಾರರ ಕುಟುಂಬದ ಹೆಸರು ಒಲಗದ ಚನ್ನವೀರಪ್ಪ ಆಗಿರುತ್ತದೆ. ದಾವೆಯ ಪಕ್ಷಗಾರರ ಕುಟುಂಬದ ಅಸ್ತಿಗಳು ಕುಡ್ಲೂರು ಗ್ರಾಮದ ಸರ್ವೇ ನಂಬರ್ 156 ರಲ್ಲಿ 2 ಎಕರೆ ಇರುತ್ತದೆ. ಅದನ್ನು ಹೊರತುಪಡಿಸಿ ಬೇರೆ ಆಸ್ತಿಗಳ ಬಗ್ಗೆ ನನಗೆ ಗೊತ್ತಿಲ್ಲ. ಸರ್ವೇ ನಂಬರ್ 156 ಎಷ್ಟು ಪೋಡಾಗಳಾಗಿರುತ್ತವೆ ಮತ್ತು ಸದರಿ ಜಮೀನಿನಲ್ಲಿ ಎಷ್ಟು ಜನ ಹಿಸ್ಸೆದಾರರು ಇರುತ್ತಾರೆ ಎಂದು ನನಗೆ ಗೊತ್ತಿಲ್ಲ. ವಾದಿ ಹಾಗೂ ಪ್ರತಿವಾದಿಗಳ ನಡುವೆ ಹಿಂದೆ ಮಾನ್ಯ ಹಿರಿಯ ಸಿವಿಲ್ ನ್ಯಾಯಾಲಯದಲ್ಲಿ ಅಸಲು ದಾವಾ 10/2015 ರಂತೆ ಒಂದು ದಾವೆ ನಡೆದಿರುತ್ತದೆ ಎಂದರೆ ಸರಿ. ಸದರಿ ದಾವೆಯಲ್ಲಿ ಒಟ್ಟು ಕುಟುಂಬದ ಸದಸ್ಯರಿಂದ ಸ್ವಾಧೀನ ಪಡೆಯಬೇಕೆಂದು ಡಿಕ್ರಿ ಆಗಿರುತ್ತದೆ ಎಂದರೆ ಸರಿ. ಸದರಿ ದಾವೆಯ ಡಿಕ್ರಿಯ ವಿರುದ್ದ ಪ್ರತಿವಾದಿಗಳು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿದ್ದು ಸದರಿ ಡಿಕ್ರಿಯ ವಿರುದ್ದ ತಡೆಯಾಜ್ಞೆ ಇರುತ್ತದೆ ಎಂದು ನನಗೆ ಗೊತ್ತಿಲ್ಲ. ವಾದಿ ಹಾಗೂ ಪ್ರತಿವಾದಿಗಳ ನಡುವೆ ಆದ ಗಲಾಟೆಗೆ ಸಂಬಂಧಪಟ್ಟಂತೆ ನಾನು ಠಾಣೆಗೆ ಹೋಗಿರುವುದಿಲ್ಲ. ನನ್ನ ಮುಖ್ಯ ವಿಚಾರಣ ಪ್ರಮಾಣಪತ್ರದಲ್ಲಿ ಇರುವ ಪೊಲೀಸ್ ಠಾಣೆಯ ವಿಚಾರವನ್ನು ವಾದಿಯೇ ನನಗೆ ಹೇಳಿರುತ್ತಾರೆ ಎಂದರೆ ಸರಿ. ಸದರಿ ಪೊಲೀಸ್ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ತಡೆಯಾಜ್ಞೆ ಇರುವ ಕಾರಣ ಕುಟುಂಬದ ಸ್ವತ್ತುಗಳ ಯಥಾಸ್ದಿತಿ ಕಾಪಾಡಿಕೊಳ್ಳುತ್ತೇನೆ ಎಂದು ಹೇಳಿ ವಾದಿ ಮುಚ್ಚಳಿಕೆ ಬರೆದುಕೊಟ್ಟಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಈ ವಿಚಾರವನ್ನು ನನಗೆ ತಿಳಿಸಿರುವುದಿಲ್ಲ ಎಂದರೆ ಸರಿ. ದಾವಾ ಆಸ್ತಿಯು ವಾದಿ ಹಾಗೂ ಪ್ರತಿವಾದಿಗಳ ಒಟ್ಟು ಕುಟುಂಬದ ಆಸ್ತಿ ಆಗಿದ್ದು ಅದರಲ್ಲಿ ಅವರ ಒಟ್ಟು ಕುಟುಂಬದ ಸದಸ್ಯರು ಜಂಟಿ

ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸಾಕ್ಷಿಯು ವಾದಿ ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಇರುತ್ತಾರೆ ಎಂದು ನುಡಿಯುತ್ತಾರೆ. ವಾದಿಯ ಚಿತ್ತಾವಣೆ ಮೇರೆಗೆ ಸುಳ್ಳು ಪ್ರಮಾಣಪತ್ರವನ್ನು ಸಲ್ಲಿಸಿ ಅದಕ್ಕೆ ಪೂರಕವಾಗಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ವಾದಿ ಮತ್ತು ಪ್ರತಿವಾದಿಗಳು ಯಾವ ಯಾವ ಜಾಗದ ಸ್ವಾಧೀನದಲ್ಲಿ ಇರುತ್ತಾರೆ ಎಂದು ನನಗೆ ನಿಖರವಾದ ಮಾಹಿತಿ ಇರುವುದಿಲ್ಲ ಎಂದರೆ ಸರಿ. ವಾದಿ ಮತ್ತು ಪ್ರತಿವಾದಿಗಳು ಅವರಿಗೆ ಸೇರಿದ ಕುಟುಂಬದ ಅಸ್ತಿಗಳಲ್ಲಿ ಇಲ್ಲಿಯವರೆಗೂ ಜಂಟಿ ಸ್ವಾಧೀನದಲ್ಲಿ ಇದ್ದರೂ ಸಹ ದುರುದ್ದೇಶದಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**:: ಮರು ವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸ ಇ ಎ ಒ

sd/-

ಪ್ರಧಾನ ಸಿ.ಜೆ ಮತ್ತು ಹೆ. ಜೆ.ಎಂ.ಎಫ್.ಸಿ

ತರೀಕೆರೆ.

ಸಾಕ್ಷಿಯ ಸಹಿ: